174

12

11/03/26

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರ ಹೇಳಿಕೆ :-**

**ಸೂಚನೆ :** ರಾಜ್ಯದ ಪ್ರಮುಖ ಹೂವು ಬೆಳೆಯುವ ಜಿಲ್ಲೆಗಳಾದ, ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ವಿವಿಧ ಬಗೆಯ ಹೂವಿನ ಬೆಳೆಗಳನ್ನು ಬೆಳೆಯಲಾಗುತ್ತಿದೆ. ಆದರೆ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಹೂವಿನ ಮಾರುಕಟ್ಟೆಗೆ ಸರಿಯಾದ ವ್ಯವಸ್ಥೆಯಿಲ್ಲದೆ, ಹೂವು ಬೆಳೆಗಾರರಿಗೆ ತುಂಬಾ ತೊಂದರೆಯಾಗುತ್ತಿದೆ. ಹಾಗೂ ಹೂವು ಬೆಳೆಗಾರರ ದಶಕಗಳ ಬೇಡಿಕೆಯಾದ 'ಪ್ರತ್ಯೇಕ ಹೈಟೆಕ್ ಹೂವಿನ ಮಾರುಕಟ್ಟೆ' ಸ್ಥಾಪನೆಗೆ ಸರ್ಕಾರ ಇದುವರೆಗೂ ಕ್ರಮತೆಗೆದುಕೊಂಡಿಲ್ಲ, ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಕ್ರಾಸ್ ಬಳಿ ಸುಮಾರು 46 ಎಕರ ಪ್ರದೇಶದಲ್ಲಿ ಹೈಟೆಕ್ ಹೂವಿನ ಮಾರುಕಟ್ಟೆ ನಿರ್ಮಾಣ ಮಾಡಲಾಗುವುದಾಗಿ ಸರ್ಕಾರ ಆಶ್ವಾಸನೆ ನೀಡುತ್ತಾ ಬಂದಿದೆ. ಇದಲ್ಲದೇ ಹೂವು ಬೇಗನೆ ಬಾಡಿ ಹೋಗುವುದರಿಂದ ರೈತರಿಗಾಗುವ ನಷ್ಟವನ್ನು ತಪ್ಪಿಸಲು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ **"ಅಂತರರಾಷ್ಟ್ರೀಯ ಮಟ್ಟದ ಶೈತ್ಯಾಗಾರ"** ಸ್ಥಾಪಿಸುವ ಅವಶ್ಯಕತೆ ಇರುವುದರ ಬಗ್ಗೆ ಪ್ರಸ್ತಾಪಿಸಿರುತ್ತಾರೆ.

** ** **

**ಉತ್ತರ:**

2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-90 ರಲ್ಲಿ ಘೋಷಿಸಿರುವಂತೆ ಸರ್ಕಾರದ ಆದೇಶ ಸಂಖ್ಯೆ: ಸಿಒ 155 ಎಂಆರ್‌ಇ 2025, ದಿನಾಂಕ:11.07.2025 ರಲ್ಲಿ ಚಿಕ್ಕಬಳ್ಳಾಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವತಿಯಿಂದ ಅಂತರಾಷ್ಟ್ರೀಯ ಮಟ್ಟದ ಹೈಟೆಕ್ ಹೂವಿನ ಮಾರುಕಟ್ಟೆಯನ್ನು ರೂ.141.50 ಕೋಟಿಗಳ ಅಂದಾಜು ವೆಚ್ಚದಲ್ಲಿ ಸ್ಥಾಪಿಸಲು ತಾತ್ವಿಕ ಅನುಮೋದನೆ ನೀಡಲಾಗಿರುತ್ತದೆ.

ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿಕ್ರಾಸ್ ಬಳಿ ಸುಮಾರು 20 ಎಕರ ಜಮೀನನ್ನು ಅಂತರಾಷ್ಟ್ರೀಯ ಹೂವಿನ ಮಾರುಕಟ್ಟೆ ನಿರ್ಮಾಣಕ್ಕಾಗಿ ತೋಟಗಾರಿಕೆ ಇಲಾಖೆಯಿಂದ ಚಿಕ್ಕಬಳ್ಳಾಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಹಸ್ತಾಂತರಿಸಲಾಗಿರುತ್ತದೆ.

ಸದರಿ ಯೋಜನೆಯ ಅನುಷ್ಠಾನದ ಕುರಿತಂತೆ, ಗ್ರಾಮೀಣ ಮಾರುಕಟ್ಟೆ ಅಭಿವೃದ್ಧಿ ನಬಾರ್ಡ್ ಯೋಜನೆಯ RIDF-31 ರಡಿ ರೂ.20.00 ಕೋಟಿಗಳ ವೆಚ್ಚದಲ್ಲಿ ಮೂಲಭೂತ ಸೌಲಭ್ಯಗಳಾದ ರಸ್ತೆ, ಚರಂಡಿ, ನೀರು ಸರಬರಾಜು ವ್ಯವಸ್ಥೆ, ವಿದ್ಯುದ್ದೀಕರಣ, ಮುಚ್ಚು ಹರಾಜುಕಟ್ಟೆ, ಶೌಚಾಲಯ ವ್ಯವಸ್ಥೆ ಇತ್ಯಾದಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಟೆಂಡರ್ ಕರೆಯಲು ಕ್ರಮವಹಿಸಲಾಗಿದೆ.

ಪ್ರಸ್ತುತ, ಸದರಿ ಯೋಜನೆಯ ಅನುಷ್ಠಾನದ ಕುರಿತಂತೆ ಸಮಿತಿಯು ಹೊಂದಿರುವ 20 ಎಕರೆ ಜಾಗದಲ್ಲಿ ಶೈತ್ಯಾಗಾರ ಸ್ಥಾಪನೆಗೂ ಸ್ಥಳಾವಕಾಶ ಕಲ್ಪಿಸಲಾಗಿದ್ದು, ಮುಂದಿನ ಹಂತದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಾಗ ಶೈತ್ಯಾಗಾರ ಸ್ಥಾಪನೆಗೆ ಕ್ರಮವಹಿಸಲಾಗುವುದು.

ಮುಂದುವರೆದು, ಈಗಾಗಲೇ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ಸ್ವತ್ತಿನ ಹಂಚಿಕೆ ನಿಯಂತ್ರಣ) ನಿಯಮಗಳು-2004ರ ನಿಯಮ-24ರಡಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಶೈತ್ಯಾಗಾರ ಸ್ಥಾಪನೆಗೆ ಆಸಕ್ತಿ ಹೊಂದಿ ಅರ್ಜಿ ಸಲ್ಲಿಸುವ ಖಾಸಗಿ ಉದ್ದಿಮೆದಾರರಿಗೆ/ವರ್ತಕರಿಗೆ/ಸಂಘ ಸಂಸ್ಥೆಗಳಿಗೆ ನಿವೇಶನ ದರದ ಶೇ.50ರ ರಿಯಾಯಿತಿ ದರದಲ್ಲಿ ಹಂಚಿಕೆಗೆ ಅವಕಾಶ ಕಲ್ಪಿಸಲಾಗಿರುತ್ತದೆ.

**ಸಂಖ್ಯೆ: ಸಿಒ 117 ಎಂಆರ್‌ಇ 2026**

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ
ಕೃಷಿ ಮಾರುಕಟ್ಟೆ ಸಚಿವರು